ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.3360/2024

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಮಹೇಶ್** | | |
| **ತಂದೆಃಹೆಸರು** | **ವೀರೇಶ್** | **ಪಿಡಬ್ಲೂಃ** | **3** |
| **ವಯಸ್ಸು** | **22 ವರ್ಷ** | **ಸಿಡಬ್ಲೂಃ** | **6** |
| **ಉದ್ಯೋಗಃ** | **ಚಾಲಕ** | | |
| **ವಾಸ ಸ್ಥಳಃ** | **ಮಸ್ಕಿ.** | | |

**ದಿನಾಂಕ 23-04-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ಸಿಸಿ ಟಿವಿ ಫುಟೇಜ್ ಉಳ್ಳ ಸಿಡಿ ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 7 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-7 ಎ ಎಂದು ಗುರುತಿಸಲಾಯಿತು. ಸಾಕ್ಷಿಯು ಸಿಡಿ ಯನ್ನು ನೋಡಿ ಗುರುತಿಸಿರುವುದಿಲ್ಲ, ಆದರೆ ಫೋಟೋವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ನಾನು ಬೇರೆ ಕೆಲಸಕ್ಕೆಂದು ಠಾಣೆಗೆ ಹೋಗಿದ್ದೆ, ಆ ಕಾಲಕ್ಕೆ ಸಹಿ ಮಾಡಿದ್ದೆ. ನಿಪಿ-7 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-7 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿಃ09.09.2024 ರಂದು ಬೆ.10-30 ರಿಂದ 11 ಗಂಟೆಯವರೆಗೆ ನಿಮ್ಮ & ಚಾಸಾ-7 ರವರ ಸಮಕ್ಷಮ ಚಾಸಾ-19 ರವರು ನಿಪಿ-7 ರಂತೆ ಸಿಡಿ ಜಪ್ತು ಪಂಚನಾಮೆ ಮಾಡಿ, ನಿಪಿ-8 ನ್ನು ತೆಗೆದಿದ್ದರು ಎಂದರೆ ಸರಿಯಲ್ಲ.

ನಿಪಿ-7 ರಲ್ಲಿರುವ ಸಂಗತಿಗಳ ಬಗ್ಗೆ & ಸಿಡಿಯ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ., ಸಿಂಧನೂರು.**